**Akashvani : Bangalore**
**Regional Bulletin In Kannada**
**08.05.2026 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

**೧. ಆರೋಗ್ಯ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಅಳವಡಿಸಿದರೆ ರೋಗಿಗಳಿಗೆ ಸಹಕಾರಿ ; ಎಐ ಹ್ಯಾಕಥಾನ್‌ನಲ್ಲಿ ತಜ್ಞರ ಅಭಿಮತ**

**೨. ರಾಜ್ಯದಲ್ಲಿ ಪಶುಗಳಿಗೆ ಮೇವಿನ ಕೊರತೆ ಇಲ್ಲ ; ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ಸ್ಪಷ್ಟನೆ**

**೩. ದೇಶದಲ್ಲಿ ಪ್ರಾದೇಶಿಕ ಪಕ್ಷಗಳು ಸ್ವತಂತ್ರವಾಗಿ ಅಧಿಕಾರಕ್ಕೆ ಬರುವ ವಾತಾವರಣವಿಲ್ಲ ; ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ**

**೪. ನೈಋತ್ಯ ರೈಲ್ವೆ ಸುರಕ್ಷತಾ ದಳದ ಕಾರ್ಯಾಚರಣೆ - ಏಪ್ರಿಲ್‌ನಲ್ಲಿ ೬೭ ಮಕ್ಕಳ ರಕ್ಷಣೆ**

**೫. ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗೆ ಕರ್ತವ್ಯ ಅಪ್ಲಿಕೇಷನ್ ಮೂಲಕ ದೈನಂದಿನ ಹಾಜರಾತಿ**

**<><*<><>*><>**

ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರ-ಎನ್‌ಹೆಚ್‌ಎ ಸಹಯೋಗದೊಂದಿಗೆ ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆಯ ಎರಡು ದಿನಗಳ "ಆಟೋ-ಅಡ್ಜುಡಿಕೇಶನ್ ಹ್ಯಾಕಥಾನ್ ೨೦೨೬ಕ್ಕೆ ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ಇಂದು ಚಾಲನೆ ನೀಡಲಾಯಿತು. ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಸುನೀಲ್ ಕುಮಾರ್ ಬರ್ನವಾಲ್, ಜಂಟಿ ಕಾರ್ಯದರ್ಶಿ ಜ್ಯೋತಿ ಯಾದವ್, ಭಾರತೀಯ ವಿಜ್ಞಾನ ಸಂಸ್ಥೆಯ ನಿರ್ದೇಶಕ ಪ್ರೊ.ಗೋವಿಂದನ್ ರಂಗರಾಜನ್, ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಕಾರ್ಯದರ್ಶಿ ಎಸ್.ಕೃಷ್ಣನ್ ಮತ್ತಿತರರು ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ಡಾ.ಸುನೀಲ್ ಕುಮಾರ್ ಬರ್ನವಾಲ್, ಸರ್ಕಾರಗಳು ಸಾರ್ವಜನಿಕರಿಗೆ ಹಲವು ಆರೋಗ್ಯ ಸೌಲಭ್ಯಗಳನ್ನು ಒದಗಿಸುತ್ತಿದ್ದು, ಈ ಸೇವೆಗಳಲ್ಲಿ ತಂತ್ರಜ್ಞಾನ ಅಳವಡಿಸುವ ಮೂಲಕ ಇಡೀ ವೈದ್ಯಕೀಯ ವರ್ಗಕ್ಕೆ ತಲುಪುವಂತೆ ಮಾಡಬೇಕು ಎಂದು ತಿಳಿಸಿದ್ದಾರೆ. ಆರೋಗ್ಯ ಕ್ಷೇತ್ರದಲ್ಲಿ ದತ್ತಾಂಶ ಸಂಗ್ರಹಿಸಿದಲ್ಲಿ ಆರೋಗ್ಯ ಸೇವೆ ಸುಲಭವಾಗಿ ನೀಡಲು ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ. ಜ್ಯೋತಿ ಯಾದವ್ ಮಾತನಾಡಿ ಆರೋಗ್ಯ ಕ್ಷೇತ್ರಗಳಲ್ಲಿ ಕೃತಕ ಬುದ್ಧಿಮತ್ತೆ ಅಳವಡಿಸಿಕೊಂಡಲ್ಲಿ ಸಾಕಷ್ಟು ನೆರವಾದರೂ ಹಲವು ಸವಾಲುಗಳು ಎದುರಾಗಲಿವೆ. ಹೊಸ ತಂತ್ರಜ್ಞಾನಗಳು ಬಂದರೂ ಮನುಷ್ಯ ಜ್ಞಾನ ಅತ್ಯಗತ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಪ್ರೊ.ಗೋವಿಂದನ್ ರಂಗರಾಜನ್ ಮಾತನಾಡಿ, ಆರೋಗ್ಯ ಕ್ಷೇತ್ರದಲ್ಲಿ ಕೃತಕ ಬುದ್ಧಿಮತ್ತೆ ಅಳವಡಿಸಿದಲ್ಲಿ ಸಾಮಾನ್ಯ ಜನರಿಗೆ ಸಾಕಷ್ಟು ಸಹಕಾರಿಯಾಗಲಿದೆ ಎಂದು ತಿಳಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಮೇವಿನ ಲಭ್ಯತೆ ಇದೆ ಎಂದು ಅಧಿಕಾರಿಗಳು ವರದಿ ನೀಡಿದ್ದಾರೆ ಎಂದು ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್ ತಿಳಿಸಿದ್ದಾರೆ. ಚಾಮರಾಜನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೊರರಾಜ್ಯಕ್ಕೆ ಮೇವು ಸಾಗಾಟ ನಡೆಯುತ್ತಿದ್ದರೇ ಈ ಬಗ್ಗೆ ಪರಿಶೀಲನೆ ನಡೆಸಿ ತಡೆಯುವ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಹೇಳಿದ್ದಾರೆ. ವಿಕಸಿತ ಭಾರತ ಜಿ ರಾಮ್ ಜಿ ಯೋಜನೆ ಬಗ್ಗೆ ಕೇಂದ್ರ ಸರ್ಕಾರವೇ ಗೊಂದಲದಲ್ಲಿದೆ. ಆದ್ದರಿಂದ, ನರೇಗಾವನ್ನೇ ಮುಂದುವರೆಸಬೇಕೆಂದು ಕಾನೂನು ಹೋರಾಟ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ತಮಿಳುನಾಡಿನಲ್ಲಿ ಉದ್ಭವಿಸಿರುವ ರಾಜಕೀಯ ಬಿಕ್ಕಟ್ಟು ಮುಂದಿನ ಎರಡು ಅಥವಾ ಮೂರು ದಿನಗಳಲ್ಲಿ ಬಗೆಹರಿಯಬಹುದು ಎಂದು ಕೇಂದ್ರ ಬೃಹತ್ ಕೈಗಾರಿಕಾ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಾದೇಶಿಕ ಪಕ್ಷಗಳು ಸ್ವತಂತ್ರವಾಗಿ ಅಧಿಕಾರಕ್ಕೆ ಬರುವ ವಾತಾವರಣವಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ. ಇದೇ ವೇಳೆ ಶೃಂಗೇರಿ ಮರು ಎಣಿಕೆ ವಿಚಾರ ಕುರಿತಂತೆ ಪ್ರತಿಕ್ರಿಯಿಸಿ ಕಾಂಗ್ರೆಸ್‌ನ 'ಓಟ್ ಚೋರಿ ಚರ್ಚೆ' ಅರ್ಥ ಹೀನ ಎಂದು ತಿಳಿಸಿದ್ದಾರೆ.

**<><*<><>*><>**

ನೈಋತ್ಯ ರೈಲ್ವೆ ಸುರಕ್ಷತಾ ದಳ ಪ್ರಯಾಣಿಕರ ಸುರಕ್ಷತಾ ಅಭಿಯಾನವನ್ನು ತೀವ್ರಗೊಳಿಸಿ, ಏಪ್ರಿಲ್ ೨೦೨೫ರಲ್ಲಿ ೫೭ ಮಕ್ಕಳನ್ನು ರಕ್ಷಿಸಿ, ಒಂದು ಕೋಟಿಗೂ ಹೆಚ್ಚು ಮೌಲ್ಯದ ಆಸ್ತಿಗಳನ್ನು ವಶಪಡಿಸಿಕೊಂಡಿದೆ. ಏಪ್ರಿಲ್ ೨೦೨೫ ರಲ್ಲಿ 'ನನ್ಹೆ ಫರಿಸ್ತೇ' ಕಾರ್ಯಾಚರಣೆಯ ಅಡಿಯಲ್ಲಿ ನೈಋತ್ಯ ರೈಲ್ವೆಯು ೧೨ ಹುಡುಗಿಯರು ಸೇರಿದಂತೆ ೫೭ ಮಕ್ಕಳನ್ನು ರಕ್ಷಿಸಿದೆ. ೩೫.೫೨ ಲಕ್ಷ ಮೌಲ್ಯದ ಪ್ರಯಾಣಿಕರ ಕಳೆದುಹೋದ ವಸ್ತುಗಳನ್ನು ತ್ವರಿತವಾಗಿ ವಶಪಡಿಸಿಕೊಂಡು ಹಿಂದಿರುಗಿಸಲಾಗಿದೆ "ಉಪಲಬ್ದ್" ಕಾರ್ಯಾಚರಣೆಯಡಿಯಲ್ಲಿ ೨ ಲಕ್ಷದ ೪೩ ಸಾವಿರ ರೂಪಾಯಿ ಮೌಲ್ಯದ ಟಿಕೆಟ್‌ಗಳನ್ನು ವಶಪಡಿಸಿಕೊಂಡಿದೆ. ಆಪರೇಷನ್ ಡಿಗ್ನಿಟಿ ಕಾರ್ಯಾಚರಣೆಯಡಿಯಲ್ಲಿ ಆರೈಕೆ ಮತ್ತು ರಕ್ಷಣೆಯ ಅಗತ್ಯವಿದ್ದ ಮೂವರು ವೃದ್ಧರನ್ನು ರಕ್ಷಿಸಿ, ಸಮರ್ಪಕ ಪರಿಶೀಲನೆಯ ನಂತರ ಅವರ ಕುಟುಂಬಗಳು ಹಾಗೂ ಎನ್‌ಜಿಓಗಳಿಗೆ ಹಸ್ತಾಂತರಿಸಲಾಗಿದೆ ಎಂದು ನೈಋತ್ಯ ರೈಲ್ವೆ ಪ್ರಕಟಣೆಯಲ್ಲಿ ತಿಳಿಸಿದೆ.

**<><*<><>*><>**

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ 'ಕರ್ತವ್ಯ' ಮೊಬೈಲ್ ಅಪ್ಲಿಕೇಷನ್ ಮೂಲಕ ದೈನಂದಿನ ಹಾಜರಾತಿಯನ್ನು ಆಧುನಿಕ ಹಾಜರಾತಿ ನಿರ್ವಹಣಾ ವ್ಯವಸ್ಥೆ ತಂತ್ರಾಂಶದಲ್ಲಿ ದಾಖಲಿಸುವ ಅವಕಾಶವನ್ನು ಕಲ್ಪಿಸಿಕೊಡಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಅಭಿವೃದ್ಧಿ ಪಡಿಸಿರುವ ಈ ಮೊಬೈಲ್ ಅಪ್ಲಿಕೇಷನ್ ಡೌನ್‌ಲೋಡ್ ಮಾಡಿಕೊಂಡು. ದೈನಂದಿನ ಹಾಜರಾತಿಯನ್ನು ತಂತ್ರಾಂಶದಲ್ಲಿ ನಮೂದಿಸಲು ಅಧಿಕಾರಿಗಳು ಹಾಗೂ ನೌಕರರು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

**<><*<><>*><>**

ರಾಮನಗರ ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವುದರಿಂದ ಅಂತರ್ಜಲ ಹೆಚ್ಚಾಗಿ ಬೋರ್‌ವೆಲ್‌ಗಳಿಗೆ ನೀರು ಲಭಿಸಲಿದೆ. ಈ ಮೂಲಕ ಕುಡಿಯುವ ನೀರಿನ ಸಮಸ್ಯೆ ನೀಗಿಸಬಹುದಾಗಿದೆ ಎಂದು ಸಂಸದ ಡಾ.ಸಿ.ಎನ್.ಮಂಜುನಾಥ್ ಸಲಹೆ ನೀಡಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೇಂದ್ರ ಪುರಸ್ಕೃತ ಯೋಜನೆಗಳ ಜಿಲ್ಲಾ ಮಟ್ಟದ, ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಲ್ ಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ ಕೈಗೊಂಡಿರುವ ಕಾಮಗಾರಿಗಳು ತ್ವರಿತ ಗತಿಯಲ್ಲಿ ಪೂರ್ಣಗೊಳ್ಳಲು ಸಂಬಂಧಪಟ್ಟ ಗುತ್ತಿಗೆದಾರರಿಗೆ ಸೂಚಿಸಲಾಗಿದೆ. ಕಾಮಗಾರಿಗಳನ್ನು ಪೂರ್ಣಗೊಳಿಸದ ಗುತ್ತಿಗೆದಾರರಿಗೆ ಇದುವರೆಗೂ ೫೬ ಲಕ್ಷ ರೂಪಾಯಿ ದಂಡ ವಿಧಿಸಲಾಗಿದೆ ಎಂದು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರರು ಸಭೆಗೆ ಮಾಹಿತಿ ನೀಡಿದರು. ಈ ವೇಳೆ ಜೆಜೆಎಂ ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಎಲ್ಲಾ ರೀತಿಯ ಕ್ರಮ ಕೈಗೊಳ್ಳುವಂತೆ ಸಂಸದರು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

**<><*<><>*><>**

ರಾಷ್ಟ್ರೀಯ ಹೆದ್ದಾರಿ-೧೫೦ಎ ಹತ್ತಿಗೂಡೂರು-ತಿಂಥಣಿ ಸೇತುವೆ-ಲಿಂಗಸೂಗೂರು ವಿಭಾಗದ ಅಗಲೀಕರಣ ಹಾಗೂ ಮರುನಿರ್ಮಾಣ ಕಾಮಗಾರಿಗೆ ಕೇಂದ್ರ ಸರ್ಕಾರ ಸಕಾರಾತ್ಮಕ ಸ್ಪಂದನೆ ನೀಡಿದ್ದು, ಕಾಮಗಾರಿಯನ್ನು ೨೦೨೬-೨೭ನೇ ಸಾಲಿನ ವಾರ್ಷಿಕ ಯೋಜನೆಯಲ್ಲಿ ಸೇರಿಸಲಾಗಿದೆ ಎಂದು ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ತಿಳಿಸಿದ್ದಾರೆ. ಈ ವಿಭಾಗವು ರಾಯಚೂರು ಲೋಕಸಭಾ ಕ್ಷೇತ್ರದ ವ್ಯಾಪ್ತಿಗೆ ಬರುತ್ತಿದ್ದು, ರಸ್ತೆ ಅಗಲೀಕರಣ ಮತ್ತು ಮರು ನಿರ್ಮಾಣ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳುವಂತೆ ಏಪ್ರಿಲ್ ೧೫ರಂದು ಕೇಂದ್ರ ರಸ್ತೆ ಸಾರಿಗೆ ಮತ್ತು ರಾಷ್ಟ್ರೀಯ ಹೆದ್ದಾರಿ ಸಚಿವಾಲಯದ ಕಾರ್ಯದರ್ಶಿ ವಿ.ಉಮಾಶಂಕರ್ ಅವರಿಗೆ ಮನವಿ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ. ಬೀದರ್, ಕಲಬುರಗಿ, ಯಾದಗಿರಿ ಹಾಗೂ ರಾಯಚೂರು ಜಿಲ್ಲೆಗಳನ್ನು ರಾಜ್ಯದ ರಾಜಧಾನಿ ಬೆಂಗಳೂರಿಗೆ ಸಂಪರ್ಕಿಸುವ ಪ್ರಮುಖ ಮಾರ್ಗಗಳಲ್ಲಿ ರಾಷ್ಟ್ರೀಯ ಹೆದ್ದಾರಿ-೧೫೦ಎ ಕೂಡ ಒಂದಾಗಿದೆ ಎಂದು ಹೇಳಿದ್ದಾರೆ.

**<><*<><>*><>**

ಯಾದಗಿರಿ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ಬೇಸಿಗೆ ಸಂದರ್ಭದಲ್ಲಿ ಉಂಟಾಗಬಹುದಾದ ಕುಡಿಯುವ ನೀರಿನ ಸಮಸ್ಯೆಗಳನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣ ಪರಿಹಾರ ಕ್ರಮ ಕೈಗೊಳ್ಳಬೇಕು ಎಂದು ಯಾದಗಿರಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ ಸೂಚನೆ ನೀಡಿದ್ದಾರೆ. ಸರ್ಕಾರದ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ಮೊಬೈಲ್ ಫೋನ್‌ಗಳನ್ನು ೨೪ ಗಂಟೆಯೂ ಚಾಲ್ತಿಯಲ್ಲಿ ಇರಿಸಿಕೊಳ್ಳಬೇಕು. ಯಾವುದೇ ಕಾರಣಕ್ಕೂ ಫೋನ್ ಸ್ವಿಚ್ ಆಫ್ ಮಾಡಬಾರದು. ಕೆಲ ಸಮಸ್ಯೆಗಳನ್ನು ದೂರವಾಣಿ ಮೂಲಕವೇ ತಕ್ಷಣ ಪರಿಹರಿಸಲು ಸಾಧ್ಯ ಎಂದು ತಿಳಿಸಿದ್ದಾರೆ.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು...**

೧. ಸಂಸದ ಯದುವೀರ್ ಒಡೆಯರ್ ಇಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಭೇಟಿ ಮಾಡಿ, ಸಮಾಲೋಚನೆ ನಡೆಸಿದ್ದಾರೆ. ಇದೇ ವೇಳೆ ವಿವಿಧ ಅಭಿವೃದ್ಧಿ ಯೋಜನೆಗಳ ಕುರಿತು ಚರ್ಚೆ ನಡೆಸಿದ್ದಾರೆ.

೨. ಯಾದಗಿರಿ ಜಿಲ್ಲೆಯ ಗುರುಮಠಕಲ್ ಕ್ಷೇತ್ರದ ಕಂದಕೂರ ಗ್ರಾಮಕ್ಕೆ ನೂತನ ಪಿಯುಸಿ ಕಾಲೇಜು ಮಂಜೂರಾಗಿದ್ದು, ಪ್ರಸಕ್ತ ಶೈಕ್ಷಣಿಕ ಸಾಲಿನಿಂದಲೇ ಹೆಚ್ಚಿನ ವಿದ್ಯಾರ್ಥಿ ದಾಖಲಾತಿ ಮಾಡಲು ಕ್ರಮ ಕೈಗೊಳ್ಳುವಂತೆ ಗುರುಮಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಅವರು ಪದವಿ ಪೂರ್ವ ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**